**ದಿನಾಂಕಃ 09-01-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಭೋದಿಸಲಾಯಿತು.**

**ಮಧ್ಯಂತರ ಅರ್ಜಿ ಆದೇಶದ ಮೇರೆಗೆ ಮುಂದುವರೆದ ಮುಖ್ಯ ವಿಚಾರಣೆ.**

ನಾನು ಈ ದಿನ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ . ಸದರಿ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಇರುವ ಎಲ್ಲಾ ವಿಷಯಗಳು ಸತ್ಯವಾಗಿವೆ .

ನಿ.ಪಿ- 13 : ಅಂಗನ್ಯೂನ್ಯತೆ ಪ್ರಮಾಣ ಪತ್ರ

ನಿ.ಪಿ- 14 : ಒಟ್ಟು 2 ಎಕ್ಸರೆ ಪಿಲ್ಮ್‌ಗಳು

ಎಂದು ಗುರುತಿಸಲಾಯಿತು.

ಅರ್ಜಿಯಲ್ಲಿ ಕೋರಿ ಕೊಂಡಂತೆ ಆದೇಶ ಆಗಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲುಃ 2 ನೇ ಎದುರುದಾರರ ಪರ ಶ್ರೀ.ವಿ ಎಸ್ ಎ .ವಕೀಲರಿಂದಃ**

1. ನನಗೆ ಯಾವುದೇ ಅಂಗನ್ಯೂನ್ಯತೆ ಆಗಿಲ್ಲದೇ ಇದ್ದರೂ ಸಹ ನನಗೆ ಅನುಕೂಲವಾಗಲಿ ಎಂದು ನಿಪಿ- 13 ಮತ್ತು 14 ದಾಖಲೆಗಳನ್ನು ಖೊಟ್ಟಿ ಸೃಷ್ಠಿಮಾಡಿಕೊಂಡು ಬಂದು ಹಾಜರು ಪಡಿಸಿರುತ್ತೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 4 ನೇ ಎದುರುದಾರರ ಪರ ಶ್ರೀ. ಎಸ್ ಎಸ್ ಕೆ ವಕೀಲರಿಂದಃ**

1. ಅಪಘಾತ ಆದ ನಂತರ ಇಲ್ಲಿಯವರೆಗೂ ಡಾ. ಚಂದ್ರಕಾಂತ ಬಳಿ ನಾನು ಯಾವುದೇ ಚಿಕಿತ್ಸೆ ಪಡೆದಿಲ್ಲ ಎಂದರೆ ಸರಿ. ನಾನು ಕೇವಲ ಅಂಗನ್ಯೂನ್ಯತೆ ಪ್ರಮಾಣ ಪತ್ರ ಪಡೆಯಲು ಮಾತ್ರ ಹೋಗಿದ್ದೆ ಎಂದರೆ ಸಾಕ್ಷಿ ಕಾಲು ನೋವು ಇದ್ದುದ್ದರಿಂದ ನಾನು ಅವರ ಬಳಿ ಹೋಗಿದ್ದೆ ಎಂದು ಹೇಳುತ್ತಾರೆ. ನಾನು ಅವರ ಬಳಿ 5-6 ಬಾರಿ ಚಿಕಿತ್ಸೆಗಾಗಿ ಹೋಗಿರುತ್ತೇನೆ. ಪ್ರತಿಬಾರಿ ಹೋದಾಗ ಸಲಹಾ ಚೀಟಿ ಕೊಡುತ್ತಾರೆ ಎಂದರೆ ಸರಿ. ಆ ಸಲಹಾ ಚೀಟಿಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿರುವುದಿಲ್ಲ. ನಾನು ಹೇಳಿದ ಹಾಗೆ ನನಗೆ ಅನುಕೂಲವಾಗುವಂತೆ ಅಂಗನ್ಯೂನ್ಯತೆ ಪ್ರಮಾಣ ಪತ್ರ ಕೊಡುತ್ತಾರೆ ಎಂದು ಆ ವೈದ್ಯರ ಬಳಿ ಹೋಗಿದ್ದೆ ಎಂದರೆ ಸರಿಯಲ್ಲ. ನನ್ನ ಹೇಳಿಕೆಯ ಆಧಾರದ ಮೇಲೆ ನಿಪಿ- 13 ಅಂಗನ್ಯೂನ್ಯತೆ ಪ್ರಮಾಣ ಪತ್ರ ಕೊಟ್ಟಿರುತ್ತಾರೆ ಎಂದರೆ ಸಾಕ್ಷಿ ನನ್ನನ್ನು ಪರೀಕ್ಷೆ ಮಾಡಿ ಕೊಟ್ಟಿರುತ್ತಾರೆ ಎಂದು ಹೇಳುತ್ತಾರೆ. ನಿಪಿ- 14 ರಲ್ಲಿ ಯಾವುದೇ ಮೂಳೆ ಮುರಿತ ಆಗಿರುವುದು ಕಂಡು ಬರುವುದಿಲ್ಲ ಎಂದರೆ ಸರಿಯಲ್ಲ. ನನಗೆ ಹೆಚ್ಚಿನ ಪರಿಹಾರ ಸಿಗಲಿ ಎಂದು

ವೈದ್ಯರ ಜೊತೆ ಮಿಲಾಪೆಯಾಗಿ ಸುಳ್ಳು ಅಂಗನ್ಯೂನ್ಯತೆ ಪ್ರಮಾಣ ಪತ್ರ ತಂದು ಹಾಜರು ಪಡಿಸಿರುತ್ತೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u>** 1 ಮತ್ತು 3 ನೇ ಎದುರುದಾರರ ಪರ ವಕೀಲರು ಗೈರು ಹಾಜರಿದ್ದು ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರು ವಿಚಾರಣೆಃ ಏನೂ  ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

ಸಹಿ/-

1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಂ.ಎಫ್.ಸಿ ರಾಣೇಬೆನ್ನೂರು.